ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಸ್ವಾತಂತ್ರ್ಯದ ಅಮೃತ ಮಹೋತ್ಸವ

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ16/21723/2021-22 ದಿನಾಂಕ : 22 JUL 2022

## ಸುತ್ತೋಲೆ

**ವಿಷಯ:** ದಿನಾಂಕ: 23.07.2022 ಮತ್ತು 24.07.2022 ರಂದು ವಿವಿಧ ಹುದ್ದೆಗಳ ನೇಮಕಾತಿಗಾಗಿ ಕವಿಪ್ರನಿನಿ ವತಿಯಿಂದ ಬೆಂಗಳೂರು ನಗರದಲ್ಲಿ ನಡೆಸಲಾಗುತ್ತಿರುವ ಆಪ್ಟಿಟ್ಯೂಡ್ ಪರೀಕ್ಷೆಗೆ ತಡೆರಹಿತ ವಿದ್ಯುತ್ ಸರಬರಾಜು ನೀಡಲು ಅಧಿಕಾರಿ ಮತ್ತು ನೌಕರರು ಕಚೇರಿಯಲ್ಲಿ ಹಾಜರಿರುವ ಬಗ್ಗೆ.

**ಉಲ್ಲೇಖ:**
1. ನಿಗಮದ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/21723/2021-22, ದಿನಾಂಕ: 01.02.2022.
2. ನಿಗಮದ ದಿನಾಂಕ: 12.07.2022 ರ ಸಮಸಂಖ್ಯೆಯ ಪತ್ರ.

*****

ನಿಗಮದ ದಿನಾಂಕ: 01.02.2022 ರ ಉದ್ಯೋಗ ಪ್ರಕಟಣೆಗೆ ಅನುಗುಣವಾಗಿ, ದಿನಾಂಕ: 23.07.2022 ಮತ್ತು 24.07.2022 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಸಹಾಯಕ ಇಂಜಿನಿಯರ್(ವಿದ್ಯುತ್/ಸಿವಿಲ್) ಮತ್ತು ಕಿರಿಯ ಇಂಜಿನಿಯರ್(ವಿದ್ಯುತ್/ಸಿವಿಲ್) ಹುದ್ದೆಗಳಿಗೆ ಆಪ್ಟಿಟ್ಯೂಡ್ ಪರೀಕ್ಷೆಯನ್ನು ಬೆಂಗಳೂರು ನಗರದಲ್ಲಿ ನಡೆಸಲಾಗುತ್ತಿದೆ. ಪರೀಕ್ಷಾ ಕೇಂದ್ರಗಳಲ್ಲಿ ಕಣ್ಗಾವಲಿಗಾಗಿ ಸಿ.ಸಿ.ಟಿ.ವಿ ಕ್ಯಾಮೆರಾ ಮತ್ತು ಮೊಬೈಲ್ ಜಾಮರ್‌ಗಳನ್ನು ಬಳಸಲಾಗುತ್ತಿದೆ. ತತ್ಸಂಬಂಧ, ಪರೀಕ್ಷಾ ಕೇಂದ್ರಗಳಿಗೆ ತಡೆರಹಿತ ವಿದ್ಯುತ್ ಸರಬರಾಜು ನೀಡಲು ಸೂಕ್ತ ವ್ಯವಸ್ಥೆ ಮಾಡುವಂತೆ ದಿನಾಂಕ: 12.07.2022 ರ ಪತ್ರದಲ್ಲಿ ಬೆಸ್ಕಾಂನ ವ್ಯವಸ್ಥಾಪಕ ನಿರ್ದೇಶಕರನ್ನು ಕೋರಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, ದಿನಾಂಕ: 23.07.2022 ಮತ್ತು 24.07.2022 ರಂದು ಪರೀಕ್ಷಾ ಕೇಂದ್ರಗಳಿಗೆ ತಡೆರಹಿತ ವಿದ್ಯುತ್ ಸರಬರಾಜು ಒದಗಿಸಬೇಕಿರುವುದರಿಂದ, ಸದರಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೆಸ್ಕಾಂನ ಕಾರ್ಯ ಮತ್ತು ಪಾಲನಾ ಹಾಗೂ ಕವಿಪ್ರನಿನಿಯ ಪ್ರಸರಣ ಮಾರ್ಗ ಮತ್ತು ಉಪಕೇಂದ್ರ ವಿಭಾಗಗಳ ಸಿಬ್ಬಂದಿ ಪರೀಕ್ಷೆ ನಡೆಯುವ ದಿನಾಂಕಗಳಂದು ಕಡ್ಡಾಯವಾಗಿ ಕಚೇರಿಯಲ್ಲಿ ಹಾಜರಿರತಕ್ಕದ್ದು. ಮುಂದುವರೆದು, ಸಿ.ಸಿ.ಟಿ.ವಿ. ಕ್ಯಾಮೆರಾ ಮತ್ತು ಮೊಬೈಲ್ ಜಾಮರ್‌ಗಳು ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಮೇಲ್ವಿಚಾರಣೆ ಮಾಡಲು ನಿಯೋಜಿಸಿರುವ ಅಧಿಕಾರಿಗಳು ಸಹ ಸದರಿ ದಿನಾಂಕಗಳಂದು ಕೇಂದ್ರಸ್ಥಾನದಲ್ಲಿಯೇ ಲಭ್ಯವಿರತಕ್ಕದ್ದು. ಈ ಮೇಲಿನ ಸೂಚನೆಗಳನ್ನು ತಪ್ಪದೇ ಪಾಲಿಸುವಂತೆ ಸೂಚಿಸಲಾಗಿದೆ.

ನಿರ್ದೇಶಕರು
(ಆಡಳಿತ ಮತ್ತು ಮಾ.ಸಂ)

ಪ್ರತಿಯನ್ನು ಮಾಹಿತಿಗಾಗಿ:-

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ, ಬೆಂಗಳೂರು.
2. ಮುಖ್ಯ ಇಂಜಿನಿಯರ್(ವಿ) (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ), ಕವಿಪ್ರನಿನಿ/ಬೆಸ್ಕಾಂ.

https://kptcl.karnataka.gov.in/ for information of:

3. ಅಧೀಕ್ಷಕ ಇಂಜಿನಿಯರ್ (ವಿ) (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ), ಕವಿಪ್ರನಿನಿ/ಬೆಸ್ಕಾಂ.
4. ಕಾರ್ಯನಿರ್ವಾಹಕ ಇಂಜಿನಿಯರ್ (ವಿ) (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿ), ಕವಿಪ್ರನಿನಿ/ಬೆಸ್ಕಾಂ.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.